# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ
ಟಮಕ, ಕೋಲಾರ-563 103

ಸಂಖ್ಯೆ: ಬೆಂ.ಉ.ವಿ./ಕು.ಸ.ಕಾ/ಸಂ.ನವೀ/494/2018-19

ದಿನಾಂಕ: 07-08-2018

**ಅಧಿಸೂಚನೆ**

**ವಿಷಯ : 2018-19ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.**

**ಉಲ್ಲೇಖ : ಕ್ರಮಾಂಕ ಇಡಿ 304 ಯುಬಿವಿ 2018, ದಿನಾಂಕ:07-08-2018.**

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು, 2018-19ನೇ ಸಾಲಿಗೆ ಕೆ.ಜಿ.ಎಫ್‌ನ ಶ್ರೀ ಭಗವಾನ್ ಮಹಾವೀರ್ ಜೈನ್ ಎಜುಕೇಷನಲ್ ಅಂಡ್ ಕಲ್ಚರಲ್ ಟ್ರಸ್ಟ್(ರಿ) ನಂ.285, 2ನೇ ಮಹಡಿ, ಈಶ್ವರಿ ಮ್ಯಾನ್ಷನ್, ಅವೆನ್ಯೂ ರಸ್ತೆ, ಬೆಂಗಳೂರುವತಿಯಿಂದ ಶ್ರೀ ಭಗವಾನ್ ಮಹಾವೀರ್ ಜೈನ್ ಪ್ರಥಮ ದರ್ಜೆ ಕಾಲೇಜು, ಗೀತಾ ರಸ್ತೆ, ರಾಬರ್ಟ್‌ಸನ್ ಪೇಟೆ, ಕೆ.ಜಿ.ಎಫ್, ಕೋಲಾರ-563122, ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 30 (ಮುವತ್ತು) |

***ವಿ.ಸೂ:** 2018-19ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟ್ /ಸ್ಥಳೀಯ ವಿಚಾರಣಾ ಸಮಿತಿ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

**ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸ್‌ಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರುಮಾಡುವುದಿಲ್ಲ; ಅದು ಶಾಶ್ವತ ಅನುದಾನರಹಿತ ಕೋರ್ಸ್‌ಗಳೆಂದು ಪರಿಗಣಿಸತಕ್ಕದ್ದು.
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾಳಿಗಳ ಉಪಬಂಧಗಳನ್ನು ತಪ್ಪದೆ ಪಾಲಿಸತಕ್ಕದ್ದು;
3. ನಿಗದಿತ ವಿಧ್ಯಾರ್ಥಿ ಪ್ರಮಾಣಕ್ಕಿಂತ ವಿಧ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಶರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
6. ಕಾಲೇಜು / ಆಡಳಿತ ಮಂಡಳಿಯು ಶೇ.50ರಷ್ಟು ವಿಶ್ವವಿದ್ಯಾಲಯಕ್ಕೆ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ವಸೂಲಿ ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ: 13-08-1997ರಂದು ವಿಶಾಖ v/s ರಾಜಾಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಮ್ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರಿದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟ್‌ನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

Sri Bhagawan Mahaveer Jain First Grade College
(Affiliated to Bengaluru North University)

# Renewal/Continuation Affiliation PG - M.Com courses

# for the academic year 2018 – 2019.

| Sl. No. | Continuation of Affiliation | Sanctioned Intake 2018 - 2019 |
|---|---|---|
| 1 | M.Com | 30 |

PRINCIPAL
SRI BHAGAWAN MAHAVEER JAIN
FIRST GRADE COLLEGE
Geetha Road, Robertson, K.G.F.-563 1



Group Head Office
91/2, Dr. A N Krishna Rao Road
V V Puram, Bangalore - 560 004
P +91 80 2661 5246

Campus
Geetha Road, Robertsonpet
K.G.F - 563 122
P +91 8153 261 733 / 833